# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೈಲಹೊಂಗಲ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ–1)ಸರ್ಕಾರದ ಅಂತಿಮ ಅನುಮೋದನೆ ನೀಡುವ ಸಂಬಂಧ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ:ನಅಇ 18/ಬೆಮಪ್ರಾ/2008 ದಿನಾಂಕ:15.02.2008

2) .ಬೈಲಹೊಂಗಲ ಪುರಸಭಾ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ:ಯೋಪ್ರಾಪುಸಸಬೈ/ಮ.ಯೋ.ಪ–1ಅಂ:2009–10/95ದಿನಾಂಕ:27.04.2010

3) .ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕ್ಚೇರಿಯ ಏಕ ಕಡತ ಸಂಖ್ಯೆ:ನಯೋ(7)ಉನೀಯೋ(ವಿ)ರಾಮದುರ್ಗ/ಮಯೋಪ–1/ಅಂತಿಮ/10 ಯಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ:

********

<u>ಪ್ರಸ್ತಾವನೆ:</u>

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಬೈಲಹೊಂಗಲ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ–1)ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಬೈಲಹೊಂಗಲ ಪುರಸಭೆ ಯೋಜನಾ ಪ್ರಾಧಿಕಾರವು ಬೈಲಹೊಂಗಲ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪ–1)ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆ (ಪರಿಷ್ಕೃತ–1) ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ ರಾಮದುರ್ಗ ಪಟ್ಟಣದ ಜನಸಂಖ್ಯೆಯು 2021ನೇ ಇಸವಿಗೆ 72.000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆ (ಪ–1) ಯನ್ನು ತಯಾರಿಸಲಾಗಿದೆ. ಬೈಲಹೊಂಗಲ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 1495.57 ಹೆಕ್ಟೇರ್ ಪ್ರದೇಶದಲ್ಲಿ 725 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 725 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 379.62 ಹೆಕ್ಟೇರ್ (ಶೇ:53.16)ವಾಣಿಜ್ಯಕ್ಕಾಗಿ 34.00 ಹೆಕ್ಟೇರ್ (ಶೇ: 4.76), ಕೈಗಾರಿಕೆಗಾಗಿ 22.23 ಹೆಕ್ಟೇರ್ (ಶೇ:3.11), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 80.54 ಹೆಕ್ಟೇರ್ (ಶೇ:11.28), ಉದ್ಯಾನವನ ಮತ್ತು ಬಯಲು ಜಾಗಗಳಿಗೆ 35.11 ಹೆಕ್ಟೇರ್ (ಶೇ:4.92), ಹಾಗೂ ನಾಗರೀಕ ಸೌಲಭ್ಯಕ್ಕಾಗಿ 4.40 ಹೆಕ್ಟೇರ್ (ಶೇ: 0.61) ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 158.22 ಹೆಕ್ಟೇರ್ (ಶೇ: 22.16) ಪ್ರದೇಶವನ್ನು ನಿಗಧಿಪಡಿಸಲಾಗಿದೆ ಮಹಾ ಯೋಜನೆ (ಪ–1) ಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು,

ಕ್ರಮ ಸಂಖ್ಯೆ 329
ದಿನಾಂಕ 25/8/10
ಬೆಂಗಳೂರು

ಸದರಿ ಮಹಾ ಯೋಜನೆ (ಪ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ:ನಅಇ 189 ಬೆಮಪ್ರಾ 2010 ಬೆಂಗಳೂರು ದಿನಾಂಕ:16.08.2010</u>

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೈಲಹೊಂಗಲ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಸರ್ಕಾರವು ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆ (ಪ-1)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಷರತ್ತು: 1. ಈ ಆದೇಶದ ದಿನಾಂಕದಂದು 2 ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಪ್ರತಿಯನ್ನು

1. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
2. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಬೆಂಗಳೂರು.
3. ಮುಖ್ಯಾಧಿಕಾರಿಗಳು, ಪುರಸಭೆ ಯೋಜನಾ ಪ್ರಾಧಿಕಾರ, ರಾಮದುರ್ಗ,
4. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಬೆಳಗಾವಿ ಇವರಿಗೆ ಮಾಹಿತಿಗಾಗಿ.
5. ಕರ್ನಾಟಕ ರಾಜ್ಯ ಪತ್ರ
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:
ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳಿಗೆ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.